# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ವಾರ್ಡ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 04-12-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದ ಸದಸ್ಯರು,

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ. ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು.
2. ಶ್ರೀ ಹೆಚ್.ಎ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು.
3. ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು.
5. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್. 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

ಹಾಜರಿದ್ದ ಅಧಿಕಾರಿಗಳು

1. ಶ್ರೀ ರಾಜಶೇಖರ್. ಕಂದಾಯ ನಿರೀಕ್ಷಕರು.
2. ಶ್ರೀ ರಾಜೇಶ್. ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್,
4. ಮಾರ್ಷಲ್. ವಾರ್ಡ್ ಸಂಖ್ಯೆ.29. ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

ಸಭೆಯ ನಡವಳಿಗಳು

1) ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್. 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಬಿಡಿಎ ಬಡಾವಣೆಯಲ್ಲಿನ ರಸ್ತೆಗಳ ಶೋಲ್ಡರ್ ಡ್ರೇನ್‌ಗಳನ್ನು ಸ್ವಚ್ಛಗೊಳಿಸಲು ಹಾಗೂ ಸದರಿ ಬಡಾವಣೆಗಳಲ್ಲಿ ಮರಗಳನ್ನು ಟ್ರಿಮ್ ಮಾಡಲು ಸಭಾ ಗಮನಕ್ಕೆ ತಂದಾಗ ಈ ಬಗ್ಗೆ ಚರ್ಚಿಸಿ, ಮಾನ್ಯ ಅಧ್ಯಕ್ಷರು, ಟ್ರಾಕ್ಟರ್ ಹಾಗೂ ಗ್ಯಾಂಗ್‌ಮೆನ್



Scanned with CamScanner

ಮುಖಾಂತರ ಅಧ್ಯತೆ ಮೇರೆಗೆ ಎಲ್ಲಾ ಹೋಲ್ಡರ್‌ಗಳನ್ನು ಸ್ವಚ್ಛಗೊಳಿಸಲು ಹಾಗೂ ಬಡಾವಣೆಗಳಲ್ಲಿನ ಮರಗಳ ರೆಂಬೆ ಕೊಂಬೆಗಳನ್ನು ಟ್ರಿಮ್ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿದರು.

2) <u>ಮಾನ್ಯ ಅಧ್ಯಕ್ಷರು ಮಾತನಾಡಿ,</u> ವಾರ್ಡ್ ಪ್ರದೇಶದ ಕಮ್ಮನಹಳ್ಳಿಯ ರಾಜ್‌ಕುಮಾರ್ ರಸ್ತೆಯು ಸ್ವಲ್ಪ ಭಾಗ ವಿರೂಪಗೊಂಡಿದ್ದು, ಕೂಡಲೇ ಪರಿಶೀಲಿಸಿ, ಕಾಂಕ್ರೀಟ್ ಹಾಕಿ ಸಮತಟ್ಟು ಮಾಡಲು ಕ್ರಮ ಕೈಗೊಳ್ಳಲು ಸಭೆಯಲ್ಲಿ ಇದ್ದ ಸಂಬಂಧಪಟ್ಟ ಅಧಿಕಾರಿಗಳಿಗೆ ಆದೇಶಿಸಿದರು.

3) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)</u> ರವರು ಮಾತನಾಡಿ, ರಾಮಯ್ಯ ಬಡಾವಣೆಯಲ್ಲಿ ಹಲವು ರಸ್ತೆಗಳಲ್ಲಿ ಬಿಡಬ್ಲ್ಯೂಎಸ್‌ಎಸ್‌ಬಿ ಒಳಚರಂಡಿ ಮ್ಯಾನ್‌ಹೋಲ್ ಗಳು ಡಾಂಬರ್ ರಸ್ತೆಯಿಂದ ಮುಚ್ಚಲ್ಪಟ್ಟಿರುತ್ತವೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ರಾಮಯ್ಯ ಬಡಾವಣೆಯಲ್ಲಿ ಪರಿಶೀಲಿಸಿ, ಮುಚ್ಚಲ್ಪಟ್ಟಿರುವ ಮ್ಯಾನ್‌ಹೋಲ್‌ಗಳನ್ನು ಬಣ್ಣದಿಂದ ಗುರುತಿಸಿ, ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ, ಬಿಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

4) <u>ಮಾನ್ಯ ಅಧ್ಯಕ್ಷರು ಮಾತನಾಡಿ,</u> ವಾರ್ಡ್ ಪ್ರದೇಶದ ಕಮ್ಮನಹಳ್ಳಿ, ಹೆಣ್ಣೂರು ಮುಖ್ಯರಸ್ತೆ ಹಾಗೂ ನೆಹರು ರಸ್ತೆಗಳಲ್ಲಿ ರಾತ್ರಿ ಸಮಯದಲ್ಲಿ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ ಎಂದು ಸಾರ್ವಜನಿಕರು ಮೌಖಿಕವಾಗಿ ದೂರು ನೀಡಿರುತ್ತಾರೆ ಎಂದು ಸಭೆಗೆ ತಿಳಿಸುತ್ತಾ, ಸಭೆಯಲ್ಲಿ ಬೀದಿ ದೀಪಗಳ ವಿಭಾಗದವರು ನಿರಂತರವಾಗಿ ಗೈರು ಹಾಜರಿಯಾಗುತ್ತಿರುವುದಕ್ಕೆ ಸಭೆಯು ಆಕ್ಷೇಪಿಸಿತು ಮತ್ತು ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗಲು ಸೂಚಿಸಲು ಸಭೆಯು ಸರ್ವಾನುಮತದಿಂದ ಸೂಚಿಸಿತು.

5) <u>ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ,</u> ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಪರೀಕ್ಷೆಗಳಿಗೆ ಒಳಪಟ್ಟ 1371 ಪ್ರಕರಣಗಳಿದ್ದು, ಈ ಪೈಕಿ 02 ಪ್ರಕರಣ ಮಾತ್ರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಸಾರ್ವಜನಿಕರಿಗೆ ಒಟ್ಟು 53752 ಪರೀಕ್ಷೆಗಳನ್ನು ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 46033 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

Prasanna Kumar .A

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

<u>ಪ್ರತಿಯನ್ನು</u>

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner